ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 19/10/2019

# ಗಣಿಗಾರಿಕೆ: ರೆಡ್ಡಿ ವಿರುದ್ಧದ ಆದೇಶ ರದ್ದು



■ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಹೊರಡಿಸಿದ್ದ ಆದೇಶ

**ಬೆಂಗಳೂರು:** ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಮಾಜಿ ಸಚಿವ ಗಾಲಿ ಜನಾರ್ದನ ರೆಡ್ಡಿ ವಿರುದ್ಧ ಐಪಿಸಿ ಸೆಕ್ಷನ್-409 ಅಡಿ (ನಂಬಿಕೆ ದ್ರೋಹ) ಆರೋಪವನ್ನು ಕೈಬಿಟ್ಟು, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಹೊರಡಿಸಿದ್ದ ಆದೇಶವನ್ನು ಹೈಕೋರ್ಟ್ ಶುಕ್ರವಾರ ರದ್ದುಪಡಿಸಿದೆ.

ವಿಶೇಷ ನ್ಯಾಯಾಲಯದ ಆದೇಶ ರದ್ದು ಕೋರಿ ಸಿಬಿಐ ಸಲ್ಲಿಸಿದ್ದ ಕ್ರಿಮಿನಲ್ ಮರು ಪರಿಶೀಲನಾ ಅರ್ಜಿಯನ್ನು ಪುರಸ್ಕರಿಸಿದ ನ್ಯಾ. ಬಿ.ಎ. ಪಾಟೀಲ್ ಅವರಿದ್ದ ಏಕ ಸದಸ್ಯ ನ್ಯಾಯಪೀಠ, ಸಿಬಿಐ ಮನವಿ ಪುರಸ್ಕರಿಸಿ, 2018ರಲ್ಲಿ ಅಧೀನ ನ್ಯಾಯಾಲಯ ನೀಡಿದ್ದ ಆದೇಶವನ್ನು ರದ್ದುಗೊಳಿಸಿತು.



ಮೆಸರ್ಸ್ ಡ್ರೀಮ್ ಲಾಜಿಸ್ಟಿಕ್ ಕಂಪನಿ (ಇಂಡಿಯಾ) ಪ್ರೈವೇಟ್ ಲಿಮಿಟೆಡ್ ಸಂಸ್ಥೆಯು 2009ರ ಜ.1ರಿಂದ 2010ರ ಮೇ 31ರ ಅವಧಿಯಲ್ಲಿ ಬೇಲಿಕೇರಿ ಬಂದರು ಮೂಲಕ 9.16 ಲಕ್ಷ ಮೆಟ್ರಿಕ್ ಟನ್ ಕಬ್ಬಿಣದ ಅದಿರು ರಫ್ತು ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ 2012ರ ಸೆ.13ರಿಂದ ಸಿಬಿಐ ತನಿಖೆ ನಡೆಸಿತ್ತು. 2013ರಲ್ಲಿ ಪ್ರಕರಣ ಸಂಬಂಧ ಜನಾರ್ದನ ರೆಡ್ಡಿ ಹಾಗೂ ಇತರರ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸಿತ್ತು.

ಈ ಮಧ್ಯೆ, ತಮ್ಮನ್ನು ಸೆಕ್ಷನ್ 409ರಡಿ ಆರೋಪಗಳಿಂದ ಮುಕ್ತಗೊಳಿಸಬೇಕೆಂದು ಕೋರಿ ಜನಾರ್ದನ ರೆಡ್ಡಿ ಅರ್ಜಿ ಸಲ್ಲಿಸಿದ್ದರು. ಆ ಅರ್ಜಿ ಪುರಸ್ಕರಿಸಿದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ, ಐಪಿಸಿ ಸೆಕ್ಷನ್ 409ಅಡಿಯ ಆರೋಪದಿಂದ ಜನಾರ್ದನ ರೆಡ್ಡಿಯನ್ನು ಮುಕ್ತಗೊಳಿಸಿ, ಅಧೀನ ನ್ಯಾಯಾಲಯ ಆದೇಶಿಸಿತ್ತು.

ಐಪಿಸಿ ಸೆಕ್ಷನ್ 409ರ ಅಡಿಯಲ್ಲಿ ರೆಡ್ಡಿ ಅವರ ವಿರುದ್ಧ ಸಿಬಿಐ ಸಲ್ಲಿಸಿದ ಆರೋಪ ಪಟ್ಟಿ ಆಧರಿಸಿ ಸಾಕ್ಷಿ ವಿಚಾರಣೆಯನ್ನು ವಿಶೇಷ ನ್ಯಾಯಾಲಯವು ನಡೆಸಿತ್ತು. ಆ ಬಳಿಕ ಜನಾರ್ದನ ರೆಡ್ಡಿ ಸಲ್ಲಿಸಿದ ಅರ್ಜಿಯನ್ನು ಪರಿಗಣಿಸಿ, ಅವರ ವಿರುದ್ಧದ ನಂಬಿಕೆ ದ್ರೋಹ ಆರೋಪಗಳನ್ನು ಕೈಬಿಟ್ಟಿದೆ. ವಿಚಾರಣಾ ನ್ಯಾಯಾಲಯವು ಒಂದು ಬಾರಿ ದೋಷಾರೋಪ ಹೊರಿಸಿ, ಸಾಕ್ಷಿ ವಿಚಾರಣೆ ನಡೆಸಿದ ಮೇಲೆ ನಂತರ ಆರೋಪಗಳನ್ನು ಕೈಬಿಡಲು ಕಾನೂನಿನಲ್ಲಿ ಅವಕಾಶವಿಲ್ಲ. ಆದ್ದರಿಂದ ವಿಶೇಷ ನ್ಯಾಯಾಲಯದ ಆದೇಶ ಕಾನೂನು ಬಾಹಿರ ಹಾಗೂ ದೋಷಪೂರಿತವಾಗಿದೆ ಎಂದು ಹೈಕೋರ್ಟ್ ತೀರ್ಪಿನಲ್ಲಿ ತಿಳಿಸಿದೆ.

ಸಿಬಿಐ ಪರ ವಕೀಲ ಪಿ.ಪ್ರಸನ್ನ ಕುಮಾರ್ ವಾದ ಮಂಡಿಸಿ, ಐಪಿಸಿ ಸೆಕ್ಷನ್ 409ರ ಅಡಿಯಲ್ಲಿ ಆರೋಪ ಸಾಬೀತಾದರೆ, ಆರೋಪಿಗೆ ಜೀವಾವಧಿ ಶಿಕ್ಷೆ ವಿಧಿಸಬಹುದು. ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಜನಾರ್ದನ ರೆಡ್ಡಿ ವಿರುದ್ಧ ಸಿಬಿಐ ಈಗಾಗಲೇ ದೋಷಾರೋಪಪಟ್ಟಿ ಸಲ್ಲಿಸಿದೆ. ವಿಶೇಷ ನ್ಯಾಯಾಲಯ ವಿಚಾರಣೆ ಆರಂಭಿಸಿ ಸಾಕ್ಷಿಗಳ ಹೇಳಿಕೆಯನ್ನೂ ದಾಖಲಿಸಿಕೊಂಡಿದೆ. ಈ ಹಂತದಲ್ಲಿ ಆರೋಪ ಮಾರ್ಪಾಡು ಮಾಡುವ ನೆಪದಲ್ಲಿ ಸೆಕ್ಷನ್ 409ನ್ನು ತೆಗೆದು ಹಾಕಲು ಅವಕಾಶವಿಲ್ಲ. ವಿಶೇಷ ನ್ಯಾಯಾಲಯದ ಈ ಆದೇಶ ಕಾನೂನು ಬಾಹಿರವಾಗಿದ್ದು ಅದನ್ನು ರದ್ದುಗೊಳಿಸಬೇಕೆಂದು ಕೋರಿದರು. ಸಿಬಿಐನ ವಾದ ಪರಿಗಣಿಸಿದ ಹೈಕೋರ್ಟ್, ಈ ಆದೇಶ ನೀಡಿತು.

4